# ಪ್ರ ದ ನ್ಯಾದಂಡಾಧಿಕಾರಿಗಳ ನ್ಯಾಯಾಲಯ, ಕುಶಾಲನಗರ

## ಸಿ ಸಿ ನಂಃ 1709/2023

ಸಾಕ್ಷಿಯ ಹೆಸರು: ಯಶವಂತಕುಮಾರ ಚಾಸಾ ಃ26

ತಂದೆ / ಗಂಡನ ಹೆಸರು : ಗಂಗೇಗೌಡ ಪ್ರಾಸಾ ಃ 8

ವಯಸ್ಸು : 43

ಉದ್ಯೋಗ : ಪಿ ಐ , ಎಸ್ ಪಿ ಕಚೇರಿ, ಮಂಡ್ಯ

ವಾಸ ಸ್ಥಳ : ಮಂಡ್ಯ

**ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಿ ಪ್ರಮಾಣೀಕರಿಸಿದ ದಿಃ25.11.2025**

**ಮುಖ್ಯ ವಿಚಾರಣೆಃ ಎ ಪಿ ಪಿ ಯವರಿಂದ**

ನಾನು ಜುಲೈ 2023 ರಿಂದ ಸೆಪ್ಟೆಂಬರ 2023 ರವರೆಗೆ ಕುಶಾಲನಗರ ಟೌನ್ ಪೋಲಿಸ್ ಠಾಣೆಯಲ್ಲಿ ಪಿ ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 18.08.2023 ರಂದು ಸದರಿ ಪ್ರಕರಣದ ಕಡತವನ್ನು ಚಾಸಾ 25 ರವರಿಂದ ಪಡೆದುಕೊಂಡು ತನಿಖೆಯನ್ನು ಮುಂದುವರಿಸಿರುತ್ತೇನೆ. ದಿಃ 26.08.2023 ರಂದು ಮೈಸೂರಿನ ಆರ್ ಎಫ್ ಎಸ್ ಎಲ್ ನಿಂದ ವರದಿಯನ್ನು ಪಡೆದುಕೊಂಡಿರುತ್ತೇನೆ. ನಂತರ ದಿಃ 01.09.2023 ರಂದು ಚಾಸಾ 5 ರವರ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ದಿಃ 07.09.2023 ರಂದು ಕುಶಾಲಗನರ ಸರಕಾರಿ ಆಸ್ಪತ್ರೆಯಿಂದ ಮೃತನ ಅಂತಿಮ ವರದಿಯನ್ನು ಪಡೆದಿರುತ್ತೇನೆ. ನಂತರ ಅದೆ ದಿನ ತನಿಖೆಯನ್ನು ಪೂರೈಸಿ ದೋಷರೊಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

ಸಾಕ್ಷಿಗೆ ಆರ್ ಎಫ್ ಎಸ್ ವರದಿಯನ್ನು ತೋರಿಸಲಾಗಿ ಸಾಕ್ಷಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಸದರಿ ಆರ್ ಎಫ್ ಎಸ್ ವರದಿಯನ್ನು ನಿಪಿ 6 ಎಂದು,

ಸಾಕ್ಷಿಯ ಸಹಿಯನ್ನು ನಿಪಿ 6ಎ ಎಂದು ಗುರುತಿಸಲಾಯಿತು. ಸಾಕ್ಷಿಗೆಪಿ ಎಂ ವರದಿಯನ್ನು ತೋರಿಸಲಾಗಿ ಸಾಕ್ಷಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಸದರಿ ಪಿ ಎಂ ವರದಿಯನ್ನು ನಿಪಿ 7 ಎಂದು, ಸಾಕ್ಷಿಯ ಸಹಿಯನ್ನು ನಿಪಿ 7ಎ ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಹೆಚ್ ಸಿ ಎಂ ಕೆ ವಕೀಲರಿಂದ**

ನನ್ನ ತನಿಖಾ ಕಾಲದಲ್ಲಿ ಮೃತರ ಹೆಲ್ಮೆಟ್ ನ್ನು ಧರಿಸಿದ್ದಾರೋ ಇಲ್ಲವೋ ಎಂದು ನಾನು ವಿಚಾರಣೆ ಮಾಡಿರುವುದಿಲ್ಲ . ಚಾಸಾ 2 ರವರು ಮೃತರನ್ನು ಹೆಲ್ಮೆಟ್ ನ್ನು ಹಾಕಿಸಿಕೊಳ್ಳದೆ ಮೃತರನ್ನು ಅವರ ವಾಹನದಲ್ಲಿ ಕೂರಿಸಿಕೊಂಡು ಹೋಗಿ ನಿರ್ಲಕ್ಷ್ಯತನದಿಂದ ಅವರ ಸಾವು ಸಂಭವಿಸಿರುತ್ತದೆ ಎಂದರೆ ಸರಿಯಲ್ಲ. ನಾನು ಸಂಪೂರ್ಣವಾಗಿ ತನಿಖೆ ಮಾಡದೆ ಸುಳ್ಳು ದೋಷರೊಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ನನ್ನ ತನಿಖಾ ಕಾಲದಲ್ಲಿ ಯಾವುದೆ ಸಿಸಿಟಿವಿ ಪೂಟೇಜನ್ನು ಅಮಾನತುಪಡಿಸಿಕೊಂಡಿರುವುದಿಲ್ಲ. ನಿಪಿ 6 ಮತ್ತು 7 ನ್ನು ಈ ಪ್ರಕರಣಕೋಸ್ಕರ ಸೃಷ್ಟಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ನಾನು ಯಾವುದೆ ಸಾಕ್ಷಿದಾರರ ಹೇಳಿಕೆಯನ್ನು ಪಡೆಯದೆ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಗಿದೆ.)

ಓದಿ ಹೇಳಿ ಕೇಳಿ ಸರಿ ಇದೆ.

ಸಹಿ/-

ಪ್ರ ದ ನ್ಯಾದಂ, ಕುಶಾಲನಗರ.